# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | **1164** |
| ಮಾನ್ಯ ಸದಸ್ಯರ ಹೆಸರು | ಶ್ರೀ ಸುನೀಲ್ ವಲ್ಯಾಪುರ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 15.12.2023 |
| ಉತ್ತರಿಸುವ ಸಚಿವರು | ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಅಂಬಿಗರ ಚೌಡಯ್ಯ, ಉಪ್ಪಾರ, ಆರ್ಯವೈಶ್ಯ ನಿಗಮಗಳನ್ನು ಯಾವ ದಿನಾಂಕದಿಂದ ಜಾರಿಗೆ ತರಲಾಗಿದೆ; (ಸಂಪೂರ್ಣ ವಿವರ ನೀಡುವುದು) | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಬರುವ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮವನ್ನು ಸರ್ಕಾರದ ಆದೇಶ ಸಂಖ್ಯೆ:ಹಿಂವಕ 125 ಬಿಸಿಎ 2017 ದಿನಾಂಕ:18.05.2017 ರಂದು ಕಂಪನಿ ಅಧಿನಿಯಮ 2013ರ ಸೆಕ್ಷನ್-7 ರನ್ವಯ ನೋಂದಾಯಿಸಿ ಸ್ಥಾಪಿಸಲಾಗಿದೆ.<br><br>ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮವನ್ನು ಸರ್ಕಾರದ ಆದೇಶ ಸಂಖ್ಯೆ:ಹಿಂವಕ 124 ಬಿಸಿಎ 2017 ದಿನಾಂಕ:11.10.2017 ರಂದು ಕಂಪನಿ ಅಧಿನಿಯಮ 2013ರ ಸೆಕ್ಷನ್-7 ರನ್ವಯ ನೋಂದಾಯಿಸಿ ಸ್ಥಾಪಿಸಲಾಗಿದೆ.<br><br>ಕರ್ನಾಟಕ ಆರ್ಯವೈಶ್ಯ ಅಭಿವೃದ್ಧಿ ನಿಗಮವನ್ನು ಸರ್ಕಾರದ ಆದೇಶ ಸಂಖ್ಯೆ:ಹಿಂವಕ 210 ಬಿಸಿಎ 2018 ದಿನಾಂಕ:29.01.2019 ರಂದು ಕಂಪನಿ ಅಧಿನಿಯಮ 2013ರ ಸೆಕ್ಷನ್-7 ರನ್ವಯ ನೋಂದಾಯಿಸಿ ಸ್ಥಾಪಿಸಲಾಗಿದೆ.<br><br>ಪ್ರಸ್ತುತ ಕರ್ನಾಟಕ ಆರ್ಯವೈಶ್ಯ ಅಭಿವೃದ್ಧಿ ನಿಗಮವು ಸರ್ಕಾರದ ಆದೇಶ ಸಂಖ್ಯೆ:ಹಿಂವಕ 83 ಬಿಸಿಎ 2022 ದಿನಾಂಕ:18.04.2022 ರಂತೆ ಕಂದಾಯ ಇಲಾಖೆಯ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿದೆ. |
| ಆ) | ಈ ನಿಗಮಗಳಲ್ಲಿ ಫಲಾನುಭವಿಗಳ ಆಯ್ಕೆಗೆ ಇರುವ ಮಾನದಂಡವೇನು ಮತ್ತು ಫಲಾನುಭವಿಗಳಿಗೆ ನೀಡಲಾಗುತ್ತಿರುವ ಯೋಜನೆಯ ವಿವರ ನೀಡುವುದು; | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಬರುವ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ, ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ ಹಾಗೂ ಪ್ರಸ್ತುತ ಕಂದಾಯ ಇಲಾಖಾ ವ್ಯಾಪ್ತಿಯಡಿ ಕಾರ್ಯನಿರ್ವಹಿಸುತ್ತಿರುವ ಕರ್ನಾಟಕ ಆರ್ಯ ವೈಶ್ಯ ಅಭಿವೃದ್ಧಿ ನಿಗಮಗಳಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡಲು ಇರುವ ಮಾನದಂಡಗಳು ಹಾಗೂ ಆಯ್ಕೆ ಮಾಡಿದ ಫಲಾನುಭವಿಗಳ ವಿವರ ಮತ್ತು ನಿಗಮಗಳಿಗೆ ಒದಗಿಸಲಾದ ಅನುದಾನದ ವಿವರಗಳನ್ನು **ಅನುಬಂಧ-1 ಮತ್ತು 2** ರಲ್ಲಿ ಒದಗಿಸಲಾಗಿದೆ. |
| ಇ) | ನಿಗಮಗಳ ಪ್ರಾರಂಭದಿಂದ ಇಲ್ಲಿಯವರೆಗೆ ಆಯ್ಕೆ ಮಾಡಲಾದ ಫಲಾನುಭವಿಗಳ ಸಂಖ್ಯೆ ಎಷ್ಟು; ಮತ್ತು ಅವರಿಗೆ ನೀಡಲಾದ ಅನುದಾನ ಎಷ್ಟು; (ಸಂಪೂರ್ಣ ವಿವರ ನೀಡುವುದು) | |

| | | |
|---|---|---|
| ಈ) | ರಾಜ್ಯದಲ್ಲಿರುವ ಹಡಪದ ಅಪ್ಪಣ್ಣ ಅಭಿವೃದ್ಧಿ ನಿಗಮ ಸ್ಥಾಪನೆಗೆ ಒತ್ತಾಯ ಬಂದಿದೆಯೇ; ಬಂದಿದ್ದಲ್ಲಿ ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು? (ಮಾಹಿತಿ ನೀಡುವುದು) | ಸರ್ಕಾರದ ಗಮನಕ್ಕೆ ಬಂದಿದೆ. ಸರ್ಕಾರದ ಆದೇಶ ಸಂಖ್ಯೆ:ಹಿಂವಕ: 87 ಬಿಸಿಎ 2023, ದಿನಾಂಕ:20.02.2023 ರನ್ವಯ ಹಡಪದ ಅಭಿವೃದ್ಧಿ ನಿಗಮವನ್ನು ಸ್ಥಾಪಿಸಿ ಆದೇಶಿಸಿದೆ. |

ಸಂಖ್ಯೆ:ಹಿಂವಕ 657 ಬಿಂಎಂಎಸ್ 2023

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ
ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

## ಅನುಬಂಧ-1

**ಯೋಜನೆಗಳ ಸಂಕ್ಷಿಪ್ತ ವಿವರಗಳು ಹಾಗೂ ಅನುಷ್ಠಾನದ ವಿಧಿವಿಧಾನಗಳು:**

I. **ಸ್ವಯಂ ಉದ್ಯೋಗ ಸಾಲ ಯೋಜನೆ:**

1. ಉಪ್ಪಾರ ಮತ್ತು ಇದರ ಉಪಜಾತಿಯವರು ಸ್ವಯಂ ಉದ್ಯೋಗ ಕೈಗೊಳ್ಳಲು ಆರ್ಥಿಕ ಚಟುವಟಿಕೆಗಳಿಗನುಸಾರ ಈ ಕೆಳಕಂಡಂತೆ ಸಾಲ ಮತ್ತು ಸಹಾಯಧನ ಸೌಲಭ್ಯವನ್ನು ಒದಗಿಸಲಾಗುವುದು.
   1. ಘಟಕ ವೆಚ್ಚ ರೂ.50,000/–ಗಳಿಗೆ ಶೇ.30 ರಷ್ಟು ಗರಿಷ್ಟ ರೂ.10,000/–ಗಳ ಸಹಾಯಧನ ಉಳಿಕೆ ಶೇ.70ರಷ್ಟು ರೂ.40,000/–ಗಳನ್ನು ಶೇ.4ರ ಬಡ್ಡಿ ದರದಲ್ಲಿ ಸಾಲ.
   2. ಘಟಕ ವೆಚ್ಚ ರೂ.50,001/–ರಿಂದ ರೂ.1,00,000/–ಗಳವರೆಗೆ ಶೇ.20 ರಷ್ಟು ಗರಿಷ್ಟ ರೂ.20,000/–ಗಳ ಸಹಾಯಧನ ಉಳಿಕೆ ಶೇ.80ರಷ್ಟು ರೂ.80,000/–ಗಳನ್ನು ಶೇ.4ರ ಬಡ್ಡಿ ದರದಲ್ಲಿ ಸಾಲ.
   3. ಘಟಕ ವೆಚ್ಚ ರೂ.1,00,001/–ರಿಂದ ರೂ.2,00,000/–ಗಳವರೆಗೆ ಶೇ.15 ರಷ್ಟು ಕನಿಷ್ಟ ರೂ.20,000/–ಗಳ ಗರಿಷ್ಟ ರೂ.30,000/–ಗಳ ಸಹಾಯಧನ ಉಳಿಕೆ ಶೇ.85ರಷ್ಟು ರೂ.1,70,000/–ಗಳನ್ನು ಶೇ.4ರ ಬಡ್ಡಿ ದರದಲ್ಲಿ ಸಾಲ.

   ಮೇಲೆ ಹೇಳಿದ ಸಾಲ ಯೋಜನೆಗಳು ಸರ್ಕಾರದಿಂದ ವರ್ಷ ವರ್ಷಕ್ಕೆ ಒದಗಿಸಲಾಗುವ ಅನುದಾನ ಹಾಗೂ ಬಂಡವಾಳಗಳ ಮೊತ್ತದ ಮೇಲೆ ಅವಲಂಬಿಸಿದ್ದು, ಸಹಾಯಧನ ಮತ್ತು ಸಾಲದ ಮೊತ್ತಗಳು ಅದಕ್ಕೆ ಅನುಗುಣವಾಗಿ ರೂಪಿಸಲಾಗುತ್ತದೆ ಹಾಗೂ ಸರ್ಕಾರವು ಕಾಲಕಾಲಕ್ಕೆ ನೀಡುವ ಆದೇಶಕ್ಕೆ ಒಳಪಟ್ಟಿರುತ್ತದೆ.

2. **ಅರ್ಹತೆ:**

   ಅ) ಹಿಂದುಳಿದ ವರ್ಗಗಳ ಪ್ರವರ್ಗ–1ರಲ್ಲಿ ಬರುವ ಉಪ್ಪಾರ ಮತ್ತು ಇದರ ಉಪಜಾತಿಯವರು ಸೇರಿದವರಾಗಿರಬೇಕು.

   ಆ) ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಪ್ರದೇಶದವರಿಗೆ ರೂ.98,000/–ಗಳು ಪಟ್ಟಣ ಪ್ರದೇಶದವರಿಗೆ ರೂ.1,20,000/–ಗಳ ಒಳಗಿರಬೇಕು.

   ಇ) ಅರ್ಜಿದಾರರ ವಯಸ್ಸು 18 ರಿಂದ 55 ವರ್ಷದೊಳಗಿರಬೇಕು.

   ಈ) ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು.

   ಉ) ಈ ಹಿಂದೆ ಈಗಾಗಲೇ ನಿಗಮದ ಯೋಜನೆಗಳಲ್ಲಿ ಸೌಲಭ್ಯ ಪಡೆದಿರಬಾರದು.

3. **ಸಾಲದ ಮರುಪಾವತಿ ಅವಧಿ:** 3 ವರ್ಷಗಳು(ಮಾಸಿಕ ಕಂತುಗಳಲ್ಲಿ).

4. **ಸಾಲದ ಉದ್ದೇಶಗಳು:** ಈ ಯೋಜನೆಯಲ್ಲಿ ಕೃಷಿ ಅವಲಂಭಿತ ಚಟುವಟಿಕೆಗಳು, ವ್ಯಾಪಾರ ಚಟುವಟಿಕೆಗಳು ಹಾಗೂ ಸೇವಾ ವಲಯ ಹಾಗು ಸಣ್ಣ ಕೈಗಾರಿಕೆ ಚಟುವಟಿಕೆಗಳಿಗೆ ಸಾಲ ಸೌಲಭ್ಯ ಒದಗಿಸುವುದು.

Scanned with CamScanner

II. ಬಿ) ವೃತ್ತಿಪರ ಕೋರ್ಸ್‌ಗಳಲ್ಲಿ ವ್ಯಾಸಂಗಕ್ಕೆ ವಿದ್ಯಾರ್ಥಿಗಳಿಗೆ ಆರ್ಥಿಕ ನೆರವು: 

1. ಸಾಲದ ಉದ್ದೇಶ: ಹಿಂದುಳಿದ ವರ್ಗಗಳ ಪ್ರವರ್ಗ-1ರಲ್ಲಿ ಬರುವ ಉಪ್ಪಾರ ಮತ್ತು ಇದರ ಉಪಜಾತಿಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಶೈಕ್ಷಣಿಕಾಭಿವೃದ್ಧಿಗಾಗಿ ಆರ್ಥಿಕ ನೆರವು.
2. ಸಾಲದ ಮೊತ್ತ: ವಾರ್ಷಿಕ ರೂ.1.00ಲಕ್ಷಗಳಂತೆ ಕೋರ್ಸ್ ಅವಧಿಗೆ ಗರಿಷ್ಠ ರೂ.4.00 ಲಕ್ಷದಿಂದ ರೂ.5.00ಲಕ್ಷಗಳವರೆಗೆ ಸಾಲ.
3. ಬಡ್ಡಿದರ: ವಾರ್ಷಿಕ ಶೇ.2ರಷ್ಟು
4. ಅರ್ಹತೆ:

ಅ) ಹಿಂದುಳಿದ ವರ್ಗಗಳ ಪ್ರವರ್ಗ-1ರಲ್ಲಿ ಬರುವ ಉಪ್ಪಾರ ಮತ್ತು ಇದರ ಉಪಜಾತಿಗಳಿಗೆ ಸೇರಿರಬೇಕು.

ಆ) ಅಭ್ಯರ್ಥಿಗಳ ಕುಟುಂಬದ ವಾರ್ಷಿಕ ಆದಾಯ ರೂ.3.50ಲಕ್ಷಗಳ ಮಿತಿಯಲ್ಲಿರಬೇಕು.

ಇ) ಸಾಮಾನ್ಯ ಪ್ರವೇಶ ಪರೀಕ್ಷೆ ಮೂಲಕ(ಸಿ.ಇ.ಟಿ.) ಪ್ರವೇಶ ಪಡೆದಿರಬೇಕು.

5. ವ್ಯಾಸಂಗದ ಕೋರ್ಸ್‌ಗಳು: (1) ಬಿ.ಇ., (2) ಎಂ.ಬಿ.ಬಿ.ಎಸ್., (3) ಬಿ.ಯೂ.ಎಂ.ಎಸ್., (4) ಬಿ.ಡಿ.ಎಸ್. (5) ಬಿ.ಎ.ಎಂ.ಎಸ್. (6) ಬಿ.ಎಚ್.ಎಂ.ಎಸ್. (7) ಎಂ.ಬಿ.ಎ. (8) ಎಂ.ಟೆಕ್. (9)ಎಂ.ಇ., (10) ಎಂ.ಡಿ., (11) ಪಿಹೆಚ್.ಡಿ. (12) ಬಿ.ಸಿ.ಎ./ಎಂ.ಸಿ.ಎ (13) ಎಂ.ಎಸ್.ಆಗ್ರಿಕಲ್ಚರ್ (14)ಬಿ.ಎಸ್‌ಸಿ. ನರ್ಸಿಂಗ್, (15)ಬಿ.ಫಾರಂ/ಎಂ.ಫಾರಂ (16) ಬಿ.ಎಸ್‌ಸಿ. ಪ್ಯಾರಾ ಮೆಡಿಕಲ್ (17) ಬಿ.ಎಸ್‌ಸಿ. ಬಯೋ ಟೆಕ್ನಾಲಜಿ _(18) ಬಿ.ಟೆಕ್ (19) ಬಿ.ಪಿ.ಟಿ. (20)ಬಿ.ವಿ.ಎಸ್.ಸಿ/ಎಂ.ವಿ.ಎಸ್.ಸಿ. (21)ಬಿ.ಎನ್.ಎಂ. (22)ಬಿ.ಹೆಚ್.ಎಮ್. (23)ಎಂ.ಡಿ.ಎಸ್. (24)ಎಂ.ಎಸ್.ಡಬ್ಲ್ಯೂ (25) ಎಲ್.ಎಲ್.ಎಂ. (26)ಎಂ.ಎಫ್.ಎ. (27) ಎಂ.ಎಸ್‌ಸಿ. ಬಯೋ ಟೆಕ್ನಾಲಜಿ ಮತ್ತು (28) ಎಂ.ಎಸ್‌ಸಿ. ಎಜಿ 29)ಎಂ.ಕಾಂ 30)ಎಂ.ಎಸ್ಸಿ.

6. ಮರುಪಾವತಿ: ಕೋರ್ಸ್ ಪೂರ್ಣಗೊಂಡ 4 ತಿಂಗಳ ನಂತರ 3 ವರ್ಷಗಳಲ್ಲಿ ಮಾಸಿಕ ಕಂತುಗಳಲ್ಲಿ ಮರುಪಾವತಿ ಮಾಡುವುದು.

7. ಅಭ್ಯರ್ಥಿಗಳ ಆಯ್ಕೆ: ಕಾರ್ಯಕ್ರಮದಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಪ್ರವೇಶ ಪಡೆದು ವ್ಯಾಸಂಗ ಮಾಡುವ ವಿದ್ಯಾರ್ಥಿಗಳು/ಇತರೆ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳನ್ನು ಹಾಗು ವಿದೇಶಿ ವಿಶ್ವ ವಿದ್ಯಾಲಯಗಳಲ್ಲಿ ಉನ್ನತ ಶಿಕ್ಷಣ ವ್ಯಾಸಂಗ ಮಾಡುವ ವಿದ್ಯಾರ್ಥಿಗಳನ್ನು ಆಯಾ ಜಿಲ್ಲೆಯ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಿರುವ ಜಿಲ್ಲಾ ಆಯ್ಕೆ ಸಮಿತಿ ಮೂಲಕ ಜಿಲ್ಲೆಗೆ ನಿಗದಿಪಡಿಸಿದ ಆರ್ಥಿಕ ಮತ್ತು ಭೌತಿಕ ಗುರಿಗೆ ಅನುಗುಣವಾಗಿ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದು.

Scanned with CamScanner

III. ಗಂಗಾಕಲ್ಯಾಣ ನೀರಾವರಿ ಯೋಜನೆ:

1. ಉದ್ದೇಶ: ಹಿಂದುಳಿದ ವರ್ಗಗಳ ಪ್ರವರ್ಗ-1ರಲ್ಲಿ ಬರುವ ಉಪ್ಪಾರ ಮತ್ತು ಇದರ ಉಪಜಾತಿಗಳಿಗೆ ಸೇರಿದ ಸಣ್ಣ ಮತ್ತು ಅತಿಸಣ್ಣ ರೈತರ ಜಮೀನುಗಳಿಗೆ ನೀರಾವರಿ ಸೌಲಭ್ಯ ಒದಗಿಸಲಾಗುವುದು.
2. ಅರ್ಹತೆ: ಹಿಂದುಳಿದ ವರ್ಗಗಳ ಪ್ರವರ್ಗ-1ರಲ್ಲಿ ಬರುವ ಉಪ್ಪಾರ ಮತ್ತು ಇದರ ಉಪಜಾತಿಗಳಿಗೆ ಸೇರಿದ (ಹಿಂದುಳಿದ ವರ್ಗಗಳ ಪಟ್ಟಿಯಲ್ಲಿನ ಪ್ರವರ್ಗ-1ರ ಕ್ರ.ಸಂ.53(ಬಿ)ಯಿಂದ (ಪಿ)ವರೆಗಿನ ಜಾತಿಗಳಿಗೆ) ವರಾಗಿದ್ದು, ಸಣ್ಣ ಮತ್ತು ಅತಿ ಸಣ್ಣ ರೈತರಾಗಿರಬೇಕು. ಅವರ ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಪ್ರದೇಶದವರಿಗೆ ರೂ.98,000/-ಗಳ ಒಳಗಿರಬೇಕು.
3. **ಸೌಲಭ್ಯ:**

1. **ವೈಯುಕ್ತಿಕ ನೀರಾವರಿ ಕೊಳವೆಬಾವಿ ಯೋಜನೆ:** ಈ ಯೋಜನೆಯಲ್ಲಿ ಉಡುಪಿ, ದಕ್ಷಿಣ ಕನ್ನಡ, ಕೊಡಗು, ಉತ್ತರ ಕನ್ನಡ, ಚಿಕ್ಕಮಗಳೂರು, ಶಿವಮೊಗ್ಗ ಮತ್ತು ಹಾಸನ ಜಿಲ್ಲೆಗಳಲ್ಲಿ ಕನಿಷ್ಠ 1 ಎಕರೆ ಜಮೀನು ಹೊಂದಿರಬೇಕು. ಉಳಿಕೆ ಜಿಲ್ಲೆಗಳಲ್ಲಿ ಒಂದೇ ಸ್ಥಳದಲ್ಲಿ ಹೊಂದಿಕೊಂಡಂತೆ ಇರುವ ಕನಿಷ್ಠ 2 ಎಕರೆ ಜಮೀನು ಇರಬೇಕು.

**ಘಟಕವೆಚ್ಚ:** ರೂ.2.50ಲಕ್ಷಗಳು. ರೂ.2.00ಲಕ್ಷಗಳ ಸಹಾಯಧನ(ಸಬ್ಸಿಡಿ) ಹಾಗೂ ರೂ.50,000/-ಗಳು ವಾರ್ಷಿಕ ಶೇ.4ರ ಬಡ್ಡಿದರದಲ್ಲಿ ಸಾಲ.

**ಮರುಪಾವತಿ ಅವಧಿ:** ಸಾಲದ ಮರುಪಾವತಿ ಅವಧಿ 3 ವರ್ಷಗಳು.

ಬೆಂಗಳೂರು ನಗರ, ಬೆಂಗಳೂರು ಗ್ರಾ, ರಾಮನಗರ, ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು, ಜಿಲ್ಲೆಗಳಲ್ಲಿ ವೈಯಕ್ತಿಕ ಕೊಳವೆ ಬಾವಿಯ ಘಟಕ ವೆಚ್ಚ ರೂ.4.00ಲಕ್ಷಗಳು, ಇದರಲ್ಲಿ ರೂ.3.50ಲಕ್ಷಗಳ ಸಹಾಯಧನ ಹಾಗೂ ರೂ.50000/-ಗಳ ಸಾಲವಾಗಿರುತ್ತದೆ.

ಕೊರೆದ ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಿ ಆರ್.ಆರ್. ಸಂಖ್ಯೆ ನೀಡಿದ ನಂತರ ವಿದ್ಯುದ್ಧೀಕರಣ ವೆಚ್ಚವಾಗಿ. ಪ್ರತಿ ಕೊಳವೆ ಬಾವಿಗಳಿಗೆ ರೂ.50000/-ಗಳಂತೆ ಒಟ್ಟು ಘಟಕ ವೆಚ್ಚದಲ್ಲಿ ವಿದ್ಯುತ್ ಸರಬರಾಜು ಕಂಪನಿಗಳಿಗೆ ಪಾವತಿಸಲಾಗುವುದು.

2. **ತೆರೆದಬಾವಿ:** ವೈಯುಕ್ತಿಕ ನೀರಾವರಿ ಕೊಳವೆಬಾವಿ ಯೋಜನೆಗೆ ನಿಗದಿಪಡಿಸಿದ ಘಟಕ ವೆಚ್ಚದಲ್ಲಿ ಕರಾವಳಿ ಹಾಗೂ ಮಲೆನಾಡು ಪ್ರದೇಶದ ಜಿಲ್ಲೆಗಳಲ್ಲಿ ತೆರೆದಬಾವಿ ನೀರಾವರಿ ಸೌಲಭ್ಯ ಒದಗಿಸಲು ಅವಕಾಶವಿರುತ್ತದೆ.

Scanned with CamScanner

## IV. ಸ್ವಾವಲಂಬಿ ಸಾರಥಿ ಯೋಜನೆ:

2023–24ನೇ ಸಲಿನ ಆಯವ್ಯಯ ಭಾಷಣದ ಕಂಡಿಕೆ 161 ರಲ್ಲಿ ಘೋಷಿಸಿರುವಂತೆ ಉಪ್ಪಾರ ಸಮುದಾಯದ ನಿರುದ್ಯೋಗಿ ಯುವಜನರು ಸ್ವಯಂ ಉದ್ಯೋಗ ಕೈಗೊಳ್ಳಲು ನಾಲ್ಕು ಚಕ್ರಗಳ ವಾಹನ ಖರೀದಿಗೆ ಬ್ಯಾಂಕುಗಳಿಂದ ಪಡೆಯುವ ಸಾಲಕ್ಕೆ ಶೇ.50ರಷ್ಟು ಅಥವಾ ಗರಿಷ್ಠ ರೂ.3.00 ಲಕ್ಷಗಳ ಸಹಾಯಧನ ಸೌಲಭ್ಯ ನಿಗಮದಿಂದ ನೀಡಲಾಗುತ್ತಿದೆ. ಈ ಯೋಜನೆಯನ್ನು ಬ್ಯಾಂಕ್‌ಗಳ ಸಹಯೋಗದೊಂದಿಗೆ ಅನುಷ್ಠಾನಗೊಳಿಸಲಾಗುವುದು. ಟೂರಿಸ್ಟ್ ಟ್ಯಾಕ್ಸಿ ಕೊಳ್ಳಲು ಬ್ಯಾಂಕುಗಳು ಮಂಜೂರು ಮಾಡುವ ಸಾಲದ ವೆಚ್ಚದ ಶೇ.50 ರಷ್ಟು ಗರಿಷ್ಠ ಮೂರು ಲಕ್ಷದಂತೆ ನಿಗಮದಿಂದ ಸಹಾಯಧನ ಉಳಿಕೆ ಮೊತ್ತ ಬ್ಯಾಂಕ್ ಪಾಲಿನ ಸಾಲದ ಮೊತ್ತವಾಗಿರುತ್ತದೆ ಬ್ಯಾಂಕ್ ನಿಗಧಿಪಡಿಸಿದ ಕಂತುಗಳನ್ವಯ ಸಾಲದ ಅಸಲು ಮತ್ತು ಬಡ್ಡಿಯನ್ನು ಮರುಪಾವತಿಸಬೇಕು.

1. ಅರ್ಹತೆ:

ಅ) ಹಿಂದುಳಿದ ವರ್ಗಗಳ ಪ್ರವರ್ಗ–1ರಲ್ಲಿ ಬರುವ ಉಪ್ಪಾರ ಮತ್ತು ಇದರ ಉಪಜಾತಿಯವರು ಸೇರಿದವರಾಗಿರಬೇಕು.

ಆ) ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಪ್ರದೇಶದವರಿಗೆ ರೂ.98,000/–ಗಳು ಪಟ್ಟಣ ಪ್ರದೇಶದವರಿಗೆ ರೂ.1,20,000/–ಗಳ ಒಳಗಿರಬೇಕು.

ಇ) ಅರ್ಜಿದಾರರ ವಯಸ್ಸು 21 ರಿಂದ 45 ವರ್ಷದೊಳಗಿರಬೇಕು.

ಈ) ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು.

ಉ) ಈ ಹಿಂದೆ ಈಗಾಗಲೇ ನಿಗಮದ ಯೋಜನೆಗಳಲ್ಲಿ ಸೌಲಭ್ಯ ಪಡೆದಿರಬಾರದು.

ಊ) ಈ ಯೋಜನೆಯಲ್ಲಿ ಸವಲತ್ತು ಪಡೆಯ ಬಯಸುವ ಅರ್ಜಿದಾರರು ವಾಸಿಸ್ಕುತ್ತಿರುವ ವ್ಯಾಪ್ತಿಗೆ ಬರುವ ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಆಧಾರ್ ಸಂಯೋಜನೆಯ ಖಾತೆ ಹೊಂದಿರಬೇಕು.

ಋ) ಈ ಯೋಜನೆಯಲ್ಲಿ ಸಾಲ ಪಡೆಯುವ ಫಲಾನುಭವಿಯು ಸ್ವಯಂ ಟ್ಯಾಕ್ಸಿ ಚಾಲನೆ (Yellow Board) ಉದ್ದೇಶಕ್ಕೆ ವಾಹನವನ್ನು ನೊಂದಾಹಿಸತಕ್ಕದ್ದು.

ಎ) ಅರ್ಜಿದಾರರು ನಿರುದ್ಯೋಗಿಯಾಗಿರಬೇಕು ಸ್ವಯಂ ಘೋಷಣಾ ಪತ್ರ ಸಲ್ಲಿಸಬೇಕು.

v. <u>ಸ್ವಯಂ ಉದ್ಯೋಗಕ್ಕೆ ಸಾಲ ಯೋಜನೆ(ವಾಣಿಜ್ಯ ಬ್ಯಾಂಕುಗಳ ಸಹಯೋಗದೊಂದಿಗೆ):</u>

2023–24ನೇ ಸಲಿನ ಆಯವ್ಯಯ ಭಾಷಣದ ಕಂಡಿಕೆ 161 ರಲ್ಲಿ ಘೋಷಿಸಿರುವಂತೆ ಉಪ್ಪಾರ ಸಮುದಾಯದವರು ಸ್ವಯಂ ಉದ್ಯೋಗ ಕೈಗೊಳ್ಳಲು/ಉದ್ಯಮ ಸ್ಥಾಪಿಸಲು ವಾಣಿಜ್ಯ ಬ್ಯಾಂಕುಗಳಿಂದ ಪಡೆಯುವ ಸಾಲಕ್ಕೆ ಶೇ.20ರಷ್ಟು ಅಥವಾ ಗರಿಷ್ಠ ರೂ.1.00 ಲಕ್ಷಗಳ ಸಹಾಯಧನ ಸೌಲಭ್ಯ ನಿಗಮದಿಂದ ನೀಡಲಾಗುತ್ತಿದೆ. ಈ ಯೋಜನೆಯನ್ನು ಬ್ಯಾಂಕ್‌ಗಳ ಸಹಯೋಗದೊಂದಿಗೆ ಅನುಷ್ಠಾನಗೊಳಿಸಲಾಗುವುದು..

2. ಅರ್ಹತೆ:

ಅ) ಹಿಂದುಳಿದ ವರ್ಗಗಳ ಪ್ರವರ್ಗ–1ರಲ್ಲಿ ಬರುವ ಉಪ್ಪಾರ ಮತ್ತು ಇದರ ಉಪಜಾತಿಯವರು ಸೇರಿದವರಾಗಿರಬೇಕು.

ಆ) ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಪ್ರದೇಶದವರಿಗೆ ರೂ.98,000/–ಗಳು ಪಟ್ಟಣ ಪ್ರದೇಶದವರಿಗೆ ರೂ.1,20,000/–ಗಳ ಒಳಗಿರಬೇಕು.

ಇ) ಅರ್ಜಿದಾರರ ವಯಸ್ಸು 18 ರಿಂದ 55 ವರ್ಷದೊಳಗಿರಬೇಕು.

ಈ) ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು.

ಉ) ಈ ಹಿಂದೆ ಈಗಾಗಲೇ ನಿಗಮದ ಯೋಜನೆಗಳಲ್ಲಿ ಸೌಲಭ್ಯ ಪಡೆದಿರಬಾರದು.

ಊ) ಈ ಯೋಜನೆಯಲ್ಲಿ ಸವಲತ್ತು ಪಡೆಯ ಬಯಸುವ ಅರ್ಜಿದಾರರು ವಾಸಿಸ್ಮತ್ತಿರುವ ವ್ಯಾಪ್ತಿಗೆ ಬರುವ ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಆಧಾರ್ ಸಂಯೋಜನೆಯ ಖಾತೆ ಹೊಂದಿರಬೇಕು.

ಋ)ಅರ್ಜಿದಾರರು ನಿರುದ್ಯೋಗಿಯಾಗಿರಬೇಕು ಸ್ವಯಂ ಘೋಷಣಾ ಪತ್ರ ಸಲ್ಲಿಸಬೇಕು.

Scanned with CamScanner

## ನಿಗಮವು ಅನುಷ್ಠಾನಗೊಳಿಸುತ್ತಿರುವ ಯೋಜನೆಗಳಲ್ಲಿ ಸೌಲಭ್ಯ ಪಡೆಯಲು ಆಯಾ ಯೋಜನೆಗನುಸಾರವಾಗಿ ಸಲ್ಲಿಸಬೇಕಾದ ದಾಖಲಾತಿಗಳು.

**i. ಸಾಲ ಮಂಜೂರಾತಿ ಪೂರ್ವ ಸಲ್ಲಿಸಬೇಕಾದ ದಾಖಲೆಗಳು:**

1. ಆಯಾ ಯೋಜನೆಗೆ ನಿಗದಿ ಪಡಿಸಿದ ನಮೂನೆಯಲ್ಲಿ ಭರ್ತಿ ಮಾಡಿದ ಅರ್ಜಿ ನಮೂನೆ.
2. ಜಾತಿ ಮತ್ತು ಆದಾಯ ಪ್ರಮಾಣ ಪತ್ರ, (5 ವರ್ಷಗಳ ಅವಧಿ ಒಳಗಿರಬೇಕು. ನಕಲು ಪ್ರತಿ ಲಗತ್ತಿಸಬೇಕು ಹಾಗೂ ಸೂಚಿಸಿದಾಗ ಮೂಲ ಪ್ರತಿ ಹಾಜರು ಪಡಿಸಬೇಕು.)
3. ವಿಳಾಸ ದೃಢೀಕರಣಕ್ಕೆ ಪಡಿತರ ಚೀಟಿ/ಚುನಾವಣಾ ಗುರುತಿನ ಚೀಟಿ/ಕೆ.ಪಿ.ಟಿ.ಸಿ.ಎಲ್. ಆರ್.ಆರ್. ನಂ. ಇರುವ ಬಿಲ್ಲಿನ ಜೆರಾಕ್ಸ್ ಪ್ರತಿ/ಆಧಾರ ಕಾರ್ಡ್‌ನ ಜೆರಾಕ್ಸ್ ಪ್ರತಿ.
4. ಪಾಸ್‌ಪೋರ್ಟ್ ಅಳತೆಯ 2 ಭಾವಚಿತ್ರಗಳು.
5. ಘಟಕಗಳಿಗೆ ಅಗತ್ಯವಿದ್ದಲ್ಲಿ ಗ್ರಾಮ ಪಂಚಾಯಿತಿ/ಪಟ್ಟಣ ಪಂಚಾಯಿತಿಗಳಿಂದ ಲೈಸೆನ್ಸ್/ ಪರವಾನಗಿ ಪತ್ರ,
6. ಸಾರಿಗೆ ವಲಯದಲ್ಲಿ ಸಾಲ ಪಡೆಯಲು ಡ್ರೈವಿಂಗ್ ಲೈಸೆನ್ಸ್.(ಜೆರಾಕ್ಸ್ ಪ್ರತಿ)
7. ರೂ.1,00,000/–ಗಳಿಗಿಂತ ಹೆಚ್ಚಿನ ಸಾಲದ ಭದ್ರತೆಗೆ ನಿಗಮಕ್ಕೆ ಸ್ಥಿರಾಸ್ತಿಯನ್ನು ಆಧಾರ ಮಾಡಬೇಕು. ಅರ್ಜಿದಾರರು ಅಥವಾ ಜಾಮೀನುದಾರರು ಹೊಂದಿರುವ ಸ್ಥಿರಾಸ್ತಿಯ ದಾಖಲಾತಿಗಳಾದ, ಮೂಲ ಕ್ರಯ ಪತ್ರ, 3 ವರ್ಷಗಳ ಪಹಣಿ, ಖಾತ ಉದ್ಧರಣೆ, 13 ವರ್ಷಗಳ ಋಣಭಾರ ರಾಹಿತ್ಯ ಪ್ರಮಾಣ ಪತ್ರ, ಸ್ಥಿರಾಸ್ತಿ ಮೌಲ್ಯ ನಿರ್ಣಯ ಪತ್ರ, ಕಂದಾಯ ಪಾವತಿ ರಶೀದಿ ಇತ್ಯಾಧಿ.
8. ರಾಷ್ಟ್ರೀಕೃತ/ಶೆಡ್ಯೂಲ್/ಗ್ರಾಮೀಣ ಬ್ಯಾಂಕ್‌ನಲ್ಲಿ ಫಲಾನುಭವಿಯು ಹೊಂದಿರುವ ಬ್ಯಾಂಕ್ ಖಾತಾ ಸಂಖ್ಯೆ, ಐ.ಎಫ್.ಎಸ್.ಸಿ. ಕೋಡ್ ಹೊಂದಿದ ಪಾಸ್ ಪುಸ್ತಕದ ಜೆರಾಕ್ಸ್ ಪ್ರತಿ.
9. ಶೈಕ್ಷಣಿಕ ಸಾಲ ಯೋಜನೆಗೆ ವಿದ್ಯಾರ್ಥಿಯು ವ್ಯಾಸಂಗ ಮಾಡುತ್ತಿರುವ ಕಾಲೇಜಿನ ವ್ಯಾಸಂಗದ ದೃಢೀಕರಣ ಪತ್ರ,
10. ವಿದ್ಯಾರ್ಥಿ ಮೆರಿಟ್ ಆಧಾರದ ಮೇಲೆ ಸೀಟು ಪಡೆದಿರುವ ಬಗ್ಗೆ ಸಿ.ಇ.ಟಿ./ಪ್ರಾಧಿಕಾರ ರವರು ನೀಡಿರುವ ಸೀಟು ಹಂಚಿಕೆ ಪತ್ರ,
11. ಗಂಗಾಕಲ್ಯಾಣ ಯೋಜನೆಯಲ್ಲಿ ನೀರಾವರಿ ಸೌಲಭ್ಯ ಪಡೆಯಲು ಅರ್ಜಿದಾರರು ಸಣ್ಣ ಮತ್ತು ಅತಿಸಣ್ಣ ರೈತರಾಗಿರಬೇಕು. ಈ ಬಗ್ಗೆ ಸಂಬಂಧಿಸಿದ ತಹಶಿಲ್ದಾರ್/ಕಂದಾಯ ಅಧಿಕಾರಿಗಳಿಂದ ಪಡೆದ ದೃಢೀಕೃತ ಪ್ರಮಾಣ ಪತ್ರ ಹಾಗು ಜಮೀನಿಗೆ ಸಂಬಂಧಿಸಿದ ಪಾಹಣಿ, ಖಾತಾ ಉದ್ಧರಣೆ, ನಕ್ಷೆ, ನೀರಾವರಿ ಸೌಲಭ್ಯ ಹೊಂದಿಲ್ಲದೇ ಇರುವ ಬಗ್ಗೆ ದೃಢೀಕರಣ.
12. ಗಂಗಾಕಲ್ಯಾಣ ಯೋಜನೆಯಲ್ಲಿ ಏತನೀರಾವರಿ ಯೋಜನೆಗೆ ಭೂಮಟ್ಟದಲ್ಲಿ ದೊರೆಯುವ ನೀರನ್ನು ಬಳಸಿಕೊಳ್ಳಲು ಸಂಬಂಧಿಸಿದ ನೀರಾವರಿ ಇಲಾಖೆಯಿಂದ ಅನುಮತಿ ಪತ್ರ,

**ii. ಸಾಲ ಮಂಜೂರಾದ ನಂತರ ಸಲ್ಲಿಸಬೇಕಾದ ದಾಖಲೆಗಳು/ಭದ್ರತಾ ದಾಖಲೆಗಳು:**

1. ಸಾಲ ಮಂಜೂರಾತಿ ಆದೇಶದಲ್ಲಿ ತಿಳಿಸಿರುವಂತೆ ಸಾಲದ ಭದ್ರತಾ ದಾಖಲೆಗಳು. (ಪ್ರೋನೋಟ್, ಲೆಟರ್ ಆಫ್ ರೀಪೆಮೆಂಟ್, ಲೆಟರ್ ಆಫ್ ಗ್ಯಾರಂಟಿ, ಹೈಪಾಥಿಕೇಶನ್ ಡೀಡ್ ಇತ್ಯಾದಿ)
2. ಅರ್ಜಿದಾರರು ಮತ್ತು ಜಾಮೀನುದಾರರ ಆಸ್ತಿ ಮತ್ತು ಋಣಭಾರಗಳ ಘೋಷಣೆ.
3. ಬೇಬಾಕಿ ಪತ್ರ,
4. ರೂ.1.00ಲಕ್ಷಗಳಿಗಿಂತ ಹೆಚ್ಚಿನ ಸಾಲಕ್ಕೆ ಅರ್ಜಿದಾರರು/ಜಾಮೀನುದಾರರು ನೀಡುವ ಸ್ಥಿರಾಸ್ತಿಯ ಕಂದಾಯ ದಾಖಲೆಗಳು.

ನಿಗಮದ ಪತ್ರ ಸಂಖ್ಯೆ: ಕಆಸಅನಿ/ಸಿಆರ್-34/2023-24, ದಿ: 13.12.2023ರ ಪತ್ರಕ್ಕೆ
ಅನುಬಂಧ-1.

➢ **ಯೋಜನೆಗಳ ಸಾಮಾನ್ಯ ಮಾರ್ಗಸೂಚಿಗಳು:-**

1. ಆರ್ಯ ವೈಶ್ಯ ಸಮುದಾಯದವರು ನಮೂನೆ-ಜಿ ನಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಪಡೆದಿರಬೇಕು.
2. ಅಭ್ಯರ್ಥಿಗಳು ಬ್ಯಾಂಕ್ ಖಾತೆಗೆ ಆಧಾರ್ ಸೀಡಿಂಗ್ ಮಾಡಬೇಕು.
3. ಯೋಜನೆಗಳಲ್ಲಿ ಮಹಿಳೆಯರಿಗೆ ಶೇ.33%, ವಿಕಲಚೇತನರಿಗೆ ಶೇ.5% ಹಾಗೂ ತೃತೀಯ ಲಿಂಗಳಿಗೆ ಶೇ.5% ಮೀಸಲಾತಿ ಇರುತ್ತದೆ.
4. ಎಲ್ಲಾ ಯೋಜನೆಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕು.
5. ನಿಗಮದ ಯೋಜನೆಗಳ ಎಲ್ಲಾ ವಿವರಗಳನ್ನು QR ಕೋಡ್‌ನಲ್ಲಿ ಪಡೆಯುವುದು.

❖ **ಸ್ವಯಂ ಉದ್ಯೋಗ ನೇರ ಸಾಲ ಯೋಜನೆ:-**

1. ಸ್ವಯಂ ಉದ್ಯೋಗ ನೇರಸಾಲ ಯೋಜನೆಯಲ್ಲಿ ವ್ಯಾಪಾರ ಕೈಗೊಳ್ಳಲು ನಿಗಮದಿಂದ ಒಂದು ಲಕ್ಷ ಸಾಲ-ಸಹಾಯಧನ ನೀಡಲಾಗುವುದು. ಇದರಲ್ಲಿ ಇಪ್ಪತ್ತು ಸಾವಿರ ಸಹಾಯಧನ ಹಾಗೂ ಎಂಬತ್ತು ಸಾವಿರ ಸಾಲವನ್ನು ವಾರ್ಷಿಕ ಶೇ.4ರ ಬಡ್ಡಿದರದಲ್ಲಿ ನೀಡಲಾಗುವುದು.
2. ಅರ್ಜಿದಾರರ ವಾರ್ಷಿಕ ಆದಾಯ ಮೂರು ಲಕ್ಷ ಮಿತಿ ಒಳಗಿರಬೇಕು.
3. ಅರ್ಜಿದಾರರು 18 ವರ್ಷ ಮೇಲ್ಪಟ್ಟು 45 ವರ್ಷದೊಳಗಿನವರಾಗಿರಬೇಕು.
4. ಪಡೆದ ಸಾಲವನ್ನು 3 ವರ್ಷಗಳಲ್ಲಿ ಮರುಪಾವತಿ ಮಾಡಬೇಕು.

❖ **ಅರಿವು ಶೈಕ್ಷಣಿಕ ಸಾಲ ಯೋಜನೆ:-**

1. ಅರಿವು ಶೈಕ್ಷಣಿಕ ಸಾಲ ಯೋಜನೆಯಲ್ಲಿ ಸಿ.ಇ.ಟಿ. ಅಥವಾ ನೀಟ್ ಪ್ರವೇಶ ಪಡೆದ ವಿದ್ಯಾರ್ಥಿಗಳ ಉನ್ನತ ವ್ಯಾಸಂಗಕ್ಕೆ ಒಂದು ವರ್ಷಕ್ಕೆ ಒಂದು ಲಕ್ಷ ಶೇ.2ರ ಬಡ್ಡಿ ದರದಲ್ಲಿ ಸಾಲ ನೀಡಲಾಗುವುದು.
2. ಅರ್ಜಿದಾರರ ವಾರ್ಷಿಕ ಆದಾಯ ಆರು ಲಕ್ಷ ಮಿತಿ ಒಳಗಿರಬೇಕು.
3. ಅರ್ಜಿದಾರರು 18 ವರ್ಷ ಮೇಲ್ಪಟ್ಟು 35 ವರ್ಷದೊಳಗಿರಬೇಕು.
4. ಒಂದು ಕುಟುಂಬದಲ್ಲಿ ಇಬ್ಬರು ವಿದ್ಯಾರ್ಥಿಗಳಿಗೆ ಅವಕಾಶವಿರುತ್ತದೆ.
5. ವಿದ್ಯಾರ್ಥಿಯು ವ್ಯಾಸಂಗ ಪೂರ್ಣಗೊಂಡ 4 ತಿಂಗಳ ನಂತರ ಪಡೆದ ಸಾಲವನ್ನು 3 ವರ್ಷಗಳ ಅವಧಿಯಲ್ಲಿ ಮರು ಪಾವತಿಸಬೇಕು.

❖ **ಆರ್ಯ ವೈಶ್ಯ ಆಹಾರ ವಾಹಿನಿ ಯೋಜನೆ:-**

1. ಆರ್ಯ ವೈಶ್ಯ ಆಹಾರ ವಾಹಿನಿ ಯೋಜನೆಯಡಿಯಲ್ಲಿ ಚಾಟ್ಸ್, ಹುರಿದ ತಿನಿಸುಗಳು, ಜ್ಯೂಸ್/ಕಾಫಿ-ಟೀ ಇತ್ಯಾದಿಗಳನ್ನು ಮೊಬೈಲ್ ಕ್ಯಾಂಟೀನ್‌ನಲ್ಲಿ ವ್ಯಾಪಾರ ಮಾಡಲು ನಿಗಮದಿಂದ ಎರಡು ಲಕ್ಷ ಸಹಾಯಧನ ನೀಡಲಾಗುವುದು ಹಾಗೂ ಬಾಕಿ ಮೊತ್ತವನ್ನು ಬ್ಯಾಂಕ್/ಸಹಕಾರಿ ಸಂಘಗಳಿಂದ ಸಾಲ ಪಡೆಯಬಹುದಾಗಿದೆ.
2. ಅರ್ಜಿದಾರರ ವಾರ್ಷಿಕ ಆದಾಯ ಆರು ಲಕ್ಷ ಮಿತಿ ಒಳಗಿರಬೇಕು.
3. ಅರ್ಜಿದಾರರು 21 ವರ್ಷ ಮೇಲ್ಪಟ್ಟು 55 ವರ್ಷ ಒಳಗಿನವರಾಗಿರಬೇಕು.
4. ಅಭ್ಯರ್ಥಿಯು ಹೊಸ ವಾಹನ ಖರೀದಿಸಬೇಕು ಹಾಗೂ Food grade steel ಬಳಸಬೇಕು.
5. ಅಭ್ಯರ್ಥಿ Franchise ಪಡೆಯಲು ಸಹ ಅವಕಾಶವಿರುತ್ತದೆ.
6. ನಿಗಮದಿಂದ ಉಚಿತ ಮಾರ್ಕೆಟಿಂಗ್ ತರಬೇತಿ ನೀಡಲಾಗುವುದು.

...2

❖ **<u>ವಾಸವಿ ಜಲಶಕ್ತಿ ಯೋಜನೆ:-</u>**

1. ವಾಸವಿ ಜಲಶಕ್ತಿ ಯೋಜನೆಯಡಿಯಲ್ಲಿ ರೈತರ ಕೃಷಿ ಭೂಮಿಗೆ ನೀರಾವರಿ ಸೌಲಭ್ಯ ಒದಗಿಸಲು ಶೇ.4ರ ಬಡ್ಡಿ ದರದಲ್ಲಿ ಎರಡು ಲಕ್ಷ ಸಾಲ ಹಾಗೂ ವಿದ್ಯುದ್ದೀಕರಣಕ್ಕೆ ಐವತ್ತು ಸಾವಿರ ಸಹಾಯಧನ ನೀಡಲಾಗುವುದು.
2. ಅರ್ಜಿದಾರರ ವಾರ್ಷಿಕ ಆದಾಯ ಆರು ಲಕ್ಷ ಮಿತಿ ಒಳಗಿರಬೇಕು.
3. ಅರ್ಜಿದಾರರು 21 ವರ್ಷ ಮೇಲ್ಪಟ್ಟು 50 ವರ್ಷ ಒಳಗಿನವರಾಗಿರಬೇಕು.
4. ಅರ್ಜಿದಾರರು ಒಂದೇ ಸ್ಥಳದಲ್ಲಿ 2 ರಿಂದ 5 ಎಕರೆ ಜಮೀನು ಹೊಂದಿರಬೇಕು.
5. ಸಾಲ ಪಡೆಯಲು ಯಾವುದೇ Collateral Security ಇರುವುದಿಲ್ಲ.
6. FRUITS (Farmers Registration and Unified Beneficiary Information System) ಅಭ್ಯರ್ಥಿಯು ಕಡ್ಡಾಯವಾಗಿ FRUITS ಐ.ಡಿಯನ್ನು ರೈತ ಮಿತ್ರ ಕೇಂದ್ರಗಳಲ್ಲಿ ಪಡೆದುಕೊಂಡು ಅರ್ಜಿ ಸಲ್ಲಿಸಬೇಕು.

➢ **<u>ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಿರುವ ಜಿಲ್ಲಾ ಮಟ್ಟದ ಆಯ್ಕೆ ಸಮಿತಿಯ ವಿವರ:-</u>**

| ಕ್ರಮ ಸಂಖ್ಯೆ | ಅಧಿಕಾರಿಗಳು | ಪದನಾಮ |
|---|---|---|
| 1. | ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ | ಅಧ್ಯಕ್ಷರು |
| 2. | ಲೀಡ್ ಬ್ಯಾಂಕ್ ವ್ಯವಸ್ಥಾಪಕರು | ಸದಸ್ಯರು |
| 3. | ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ | ಸದಸ್ಯರು |
| 4. | ಜಿಲ್ಲಾಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ | ಸದಸ್ಯರು |
| 5. | ಪ್ರಧಾನ ವ್ಯವಸ್ಥಾಪಕರು, ಜಿಲ್ಲಾ ಕೈಗಾರಿಕಾ ಕೇಂದ್ರ | ಸದಸ್ಯರು |
| 6. | ಜಿಲ್ಲಾ ಅಂಗವಿಕಲರ ಕಲ್ಯಾಣ ಅಧಿಕಾರಿ | ಸದಸ್ಯರು |
| 7. | ಜಿಲ್ಲಾ ವ್ಯವಸ್ಥಾಪಕರು, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ / ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮ. | ಸದಸ್ಯ ಕಾರ್ಯದರ್ಶಿಗಳು |

**ವ್ಯವಸ್ಥಾಪಕ ನಿರ್ದೇಶಕರು.**

ಅನುಬಂಧ-1

ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ ನಿಯಮಿತ

- **ಸ್ವಯಂ ಉದ್ಯೋಗ ಸಾಲ ಮತ್ತು ಸಹಾಯಧನ ಯೋಜನೆ:-**

ಮಾನದಂಡಗಳು:-

- ಸರ್ಕಾರದ ಆದೇಶ ಸಂಖ್ಯೆ ಸಕಇ 225 ಬಿಸಿಎ 2000 ದಿನಾಂಕ 30.03.2002ರಲ್ಲಿ ಗುರುತಿಸಿದ ಪ್ರವರ್ಗ-1ರಲ್ಲಿ ಕ್ರಮ ಸಂಖ್ಯೆ 6(ಎ) ಯಿಂದ 6(ಎಕ್) ವರೆಗೆ ಬರುವ ಬೆಸ್ತ ಕೋಲಿ, ಕಬ್ಬಲಿಗ ಮೊಗವೀರ ಗಂಗಾಮತ ಮತ್ತು ಇದರ ಉಪಜಾತಿಗಳಿಗೆ ಸೇರಿದವರಾಗಿರಬೇಕು.
- ಕುಟುಂಬದ ವಾರ್ಷಿಕ ವರಮಾನ ನಗರ ಪ್ರದೇಶದವರಿಗೆ ರೂ.1,20,000/-ಗಳು ಹಾಗೂ ಗ್ರಾಮೀಣ ಪ್ರದೇಶದವರಿಗೆ ರೂ.98,000/-ಗಳು ಮೀರಿರಬಾರದು
- ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು.
- ಅರ್ಜಿದಾರರ ವಯಸ್ಸು ಕನಿಷ್ಠ 18 ವರ್ಷಗಳು ಹಾಗೂ ಗರಿಷ್ಠ 55 ವರ್ಷಗಳ ಮಿತಿಯೊಳಗಿರಬೇಕು.
- ಒಂದು ಕುಟುಂಬ ಒಬ್ಬ ಸದಸ್ಯರಿಗೆ ಮಾತ್ರ ಸಾಲ ಸೌಲಭ್ಯ ಒದಗಿಸಲಾಗುವುದು.
- ಅಭ್ಯರ್ಥಿಯು ಕೈಗೊಳ್ಳುವ ಆರ್ಥಿಕ ಚಟುವಟಿಕೆಯ ಬಗ್ಗೆ ತರಬೇತಿ/ಅನುಭವ/ತಿಳುವಳಿಕೆ ಹೊಂದಿರಬೇಕು.

- **ಗಂಗಾ ಕಲ್ಯಾಣ ನೀರಾವರಿ ಯೋಜನೆ:-**

- ಹಿಂದುಳಿದ ವರ್ಗಗಳ ಪ್ರವರ್ಗ-ಗರಲ್ಲಿ ಬರುವ ಕೋಲಿ, ಗಂಗಾಮತ, ಬೆಸ್ತ, ಕಬ್ಬಲಿಗ, ಮೊಗವೀರ ಮತ್ತು ಇದರ ಉಪಜಾತಿಗಳಿಗೆ ಸೇರಿದವರಾಗಿದ್ದು, ಸಣ್ಣ ಮತ್ತು ಅತಿ ಸಣ್ಣ ರೈತರಾಗಿರಬೇಕು.
- ಅರ್ಜಿದಾರರು ಸಣ್ಣ ಮತ್ತು ಅತಿ ಸಣ್ಣ ರೈತ ಕುಟುಂಬಕ್ಕೆ ಸೇರಿದವರಾಗಿದ್ದು, ಒಂದೇ ಸ್ಥಳದಲ್ಲಿ ಹೊಂದಿಕೊಂಡಂತೆ ಕನಿಷ್ಠ 2 ಎಕರೆ ಜಮೀನಿ ಹೊಂದಿರಬೇಕು. ಉಡುಪಿ, ದಕ್ಷಿಣ ಕನ್ನಡ, ಕೊಡಗು, ಉತ್ತರ ಕನ್ನಡ, ಚಿಕ್ಕಮಗಳೂರು, ಶಿವಮೊಗ್ಗ ಮತ್ತು ಹಾಸನ ಜಿಲ್ಲೆಗಳಿಗೆ ಸಂಬಂಧಿಸಿದಂತೆ ಕನಿಷ್ಠ 1 ಎಕರೆ ಜಮೀನು ಹೊಂದಿರಬೇಕು.
- ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು.
- ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಪ್ರದೇಶದವರಿಗೆ ರೂ.98,000/- ಗಳ ಒಳಗಿರಬೇಕು.
- ಅರ್ಜಿದಾರರು ವ್ಯವಸಾಯ ವೃತ್ತಿಯವರಾಗಿರಬೇಕು
- ಈ ಹಿಂದೆ ಈಗಾಗಲೇ ನಿಗಮದ/ಸರ್ಕಾರದ ಯೋಜನೆಗಳಲ್ಲಿ ಸೌಲಭ್ಯ ಪಡೆದಿರಬಾರದು.
- ಒಂದು ಕುಟುಂಬದ ಒಬ್ಬ ಸದಸ್ಯರಿಗೆ ಮಾತ್ರ ಸೌಲಭ್ಯ ಒದಗಿಸಲಾಗುವುದು.
- ನಿಗಮದ ನಿರ್ದೇಶಕ ಮಂಡಳಿಯು ಕಾಲ ಕಾಲಕ್ಕೆ ವಿಧಿಸುವ ಅರ್ಹತೆಗಳನ್ನು ಹೊಂದಿದವರಾಗಿರಬೇಕು.

- **ಅರಿವು ಶೈಕ್ಷಣಿಕ ಸಾಲ ಯೋಜನೆ**

- ಸರ್ಕಾರದ ಆದೇಶ ಸಂಖ್ಯೆ ಸಕಇ 225 ಬಿಸಿಎ 2000 ದಿನಾಂಕ 30.03.2002ರಲ್ಲಿ ಗುರುತಿಸಿದ ಪ್ರವರ್ಗ-1ರಲ್ಲಿ ಕ್ರಮ ಸಂಖ್ಯೆ 6(ಎ) ಯಿಂದ 6(ಎಕ್) ವರೆಗೆ ಬರುವ ಬೆಸ್ತ ಕೋಲಿ, ಕಬ್ಬಲಿಗ ಮೊಗವೀರ ಗಂಗಾಮತ ಮತ್ತು ಇದರ ಉಪಜಾತಿಗಳಿಗೆ ಸೇರಿದವರಾಗಿರಬೇಕು.
- ಅರ್ಜಿದಾರರ ವಯಸ್ಸು 35 ವರ್ಷ ಮೀರಿರಬಾರದು.
- ವಿದ್ಯಾರ್ಥಿಯ ಮತ್ತು ಅವರ ಕುಟುಂಬದ ವಾರ್ಷಿಕ ವರಮಾನವು ಎಲ್ಲಾ ಮೂಲಗಳಿಂದ ರೂ.3.50 ಲಕ್ಷಗಳನ್ನು ಮೀರಿರಬಾರದು.
- ವೃತ್ತಿಪರ/ತಾಂತ್ರಿಕ/ಉನ್ನತ ವ್ಯಾಸಂಗದ ಕೋರ್ಸ್‌ಗಳಲ್ಲಿ ಸಿ.ಇ.ಟಿ ಮೂಲಕ ಪ್ರವೇಶ ಪಡೆದು ವ್ಯಾಸಂಗ ಮಾಡುತ್ತಿರಬೇಕು.

- **ವಿದೇಶಿ ವಿಶ್ವ ವಿದ್ಯಾಲಯಗಳಲ್ಲಿ ಉನ್ನತ ಶಿಕ್ಷಣ ವ್ಯಾಸಂಗಕ್ಕೆ ಸಾಲ:-.**
    - ಸಾಲ ಮಂಜೂರಾತಿ ವರ್ಷದಲ್ಲಿ QS/ವಿದೇಶಿ ವಿಶ್ವ ವಿಶ್ವವಿದ್ಯಾನಿಲಯ ಶ್ರೇಯಾಂಕದ ಪ್ರಕಾರ ಟಾಪ್ 500 ವಿಶ್ವವಿದ್ಯಾನಿಲಯಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳು ಮಾತ್ರ ಈ ಯೋಜನೆಯಡಿ ಅರ್ಹರಾಗಿರುತ್ತಾರೆ.
    - ವಿದೇಶಿ ವಿಶ್ವ ವಿದ್ಯಾಲಯಗಳಲ್ಲಿ ಪಿ.ಹೆಚ್.ಡಿ, ಪೋಸ್ಟ್ ಡಾಕ್ಟೋರಲ್ ಮತ್ತು ಮಾಸ್ಟರ್ ಡಿಗ್ರಿ ವ್ಯಾಸಂಗಕ್ಕೆ ಪ್ರವೇಶ ಹೊಂದಿದ ಪ್ರವರ್ಗ-1ರ 6(ಎ) ಯಿಂದ 6(ಎಕೆ)ವರೆಗಿನ ಜಾತಿಗಳಿಗೆ ಸೇರಿದವರಾಗಿರಬೇಕು

- **ಸ್ವಯಂ ಉದ್ಯೋಗ ಸಾಲ ಯೋಜನೆ (ವಾಣಿಜ್ಯ ಬ್ಯಾಂಕ್‌ಗಳ ಸಹಯೋಗದೊಂದಿಗೆ):-**
    - ನಿಗಮದ ವ್ಯಾಪ್ತಿಯಲ್ಲಿ ಬರುವ ಜಾತಿ ಮತ್ತು ಉಪಜಾತಿಗೆ ಸೇರಿದವರಾಗಿರಬೇಕು.
    - ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಪ್ರದೇಶದವರಿಗೆ ರೂ.98,000/-ಗಳು ಪಟ್ಟಣ ಪ್ರದೇಶದವರಿಗೆ ರೂ.1,20,000/-ಗಳ ಒಳಗಿರಬೇಕು.
    - ಅರ್ಜಿದಾರರ ವಯಸ್ಸು 18 ರಿಂದ 55 ವರ್ಷದೊಳಗಿರಬೇಕು.
    - ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು.
    - ಅವಶ್ಯಕ ಉದ್ದಿಮೆ ಪರವಾನಗಿಯನ್ನು ಪಡೆದಿರಬೇಕು.
    - ಅರ್ಜಿದಾರರು ನಿರುದ್ಯೋಗಿಯಾಗಿರಬೇಕು (ಸ್ವಯಂ ಘೋಷಿತ ಪ್ರಮಾಣ ಪತ್ರ ಸಲ್ಲಿಸುವುದು)

- **ಸ್ವಾವಲಂಬಿ ಸಾರಥಿ ಯೋಜನೆ**
    - ನಿಗಮದ ಸಮುದಾಯಕ್ಕೆ ಸೇರಿದವರಾಗಿರಬೇಕು.
    - ಕುಟುಂಬದ ವಾರ್ಷಿಕ ವರಮಾನ ನಗರ ಪ್ರದೇಶದವರಿಗೆ ರೂ.1,20,000/-ಗಳು ಹಾಗೂ ಗ್ರಾಮೀಣ ಪ್ರದೇಶದವರಿಗೆ ರೂ.98,000/-ಗಳು ಮೀರಿರಬಾರದು
    - ಅರ್ಜಿದಾರರ ವಯಸ್ಸು ಕನಿಷ್ಠ 21 ವರ್ಷಗಳು ಹಾಗೂ ಗರಿಷ್ಠ 45 ವರ್ಷಗಳ ಮಿತಿಯೊಳಗಿರಬೇಕು.
    - ಈ ಯೋಜನೆಯಲ್ಲಿ ಆರ್ಥಿಕ ಸಹಾಯ ಪಡೆಯಲು ಇಚ್ಛಿಸುವ ಅರ್ಜಿದಾರರು ಲಘು ವಾಹನ ಚಾಲನಾ ಪರವಾನಗಿಯನ್ನು ಹೊಂದಿರಬೇಕು.
    - ಈ ಯೋಜನೆಯಲ್ಲಿ ಸೌಲಭ್ಯ ಪಡೆಯುವ ಫಲಾನುಭವಿಯು ಸ್ವಯಂ ಟ್ಯಾಕ್ಸಿ ಚಾಲನೆ (Yellow Board) ಉದ್ದೇಶಕ್ಕೆ ವಾಹನವನ್ನು ನೋಂದಾಯಿಸತಕ್ಕದ್ದು.

ಅನುಬಂಧ - ೩

## ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ ನಿಯಮಿತ

### ನಿಗಮ ಪ್ರಾರಂಭದಿಂದ ಈವರೆಗೂ ಆಯ್ಕೆಯಾದ ಫಲಾನುಭವಿಗಳಿಗೆ ಮಂಜೂರಾದ ಅನುದಾನದ ವಿವರ

| ಕ್ರ. ಸಂ. | ಯೋಜನೆಗಳ ಹೆಸರು | 2018-19 | | 2019-20 | | 2020-21 | | 2021-22 | | 2022-23 | |
|---|---|---|---|---|---|---|---|---|---|---|---|
| | | ಭೌ | ಆ | ಭೌ | ಆ | ಭೌ | ಆ | ಭೌ | ಆ | ಭೌ | ಆ |
| 1 | ಸ್ವಯಂ ಉದ್ಯೋಗ ನೇರ ಸಾಲ ಮತ್ತು ಸಹಾಯಧನ ಯೋಜನೆ | 434 | 210.70 | 920 | 457.15 | 1412 | 706.00 | 266 | 133.00 | 1309 | 654.50 |
| 2 | ಗಂಗಾ ಕಲ್ಯಾಣ ನೀರಾವರಿ ಯೋಜನೆ | 33 | 67.50 | 169 | 350.00 | 199 | 410.00 | 22 | 54.00 | 308 | 627.50 |
| 3 | ಅರಿವು ಶೈಕ್ಷಣಿಕ ಸಾಲ ಯೋಜನೆ (ಹೊಸತು) | 110 | 88.31 | 95 | 69.53 | 25 | 14.65 | - | - | 93 | 80.33 |
| 4 | ಅರಿವು ಶೈಕ್ಷಣಿಕ ಸಾಲ ಯೋಜನೆ (ನವೀಕರಣ) | - | - | 110 | 91.58 | 167 | 131.41 | 164 | 123.08 | 72 | 51.70 |
| 5 | ಬ್ಯಾಂಕುಗಳ ಸಹಯೋಗದೊಂದಿಗೆ ಸ್ವಯಂ ಉದ್ಯೋಗ (ಚೈತನ್ಯ ಸಬ್ಸಿಡಿ-ಕಂ-ಸಾಫ್ಟ್ ಲೋನ್) ಯೋಜನೆ | - | - | - | - | 72 | 22.43 | - | - | - | - |
| 6 | ಕಿರುಸಾಲ/ಸ್ವಸಹಾಯ ಗುಂಪುಗಳಿಗೆ ಸಾಲ ಮತ್ತು ಸಹಾಯಧನ ಯೋಜನೆ | - | - | - | - | 694 | 138.80 | 664 | 131.80 | - | - |
| 7 | ಕೌಶಲ್ಯಾಭಿವೃದ್ಧಿ/ಉದ್ಯಮಶೀಲತಾ ತರಬೇತಿ ಯೋಜನೆ (ಸ್ವಾತಂತ್ರ್ಯ ಮಹೋತ್ಸವದ ಮುನ್ನಡೆ ಯೋಜನೆ) | - | - | - | - | 24 | 0.20 | - | - | - | - |
| | ಒಟ್ಟು | 577 | 366.51 | 1294 | 968.26 | 2593 | 1423.49 | 1116 | 441.88 | 1782 | 1414.03 |

- 2020-21, 2021-22 ಮತ್ತು 2022-23ನೇ ಸಾಲಿನ ಗಂಗಾ ಕಲ್ಯಾಣ ನೀರಾವರಿ ಯೋಜನೆಯಡಿ ಕೊಳವೆ ಬಾವಿ ಕೊರೆಯಿಸುವ ಪ್ರಕ್ರಿಯೆ ಪ್ರಗತಿಯಲ್ಲಿದೆ.

## ಅನುಬಂಧ-02

## ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮದಿಂದ ನೀಡಲಾದ ಅನುದಾನದ ವಿವರಗಳು.

(ರೂ.ಲಕ್ಷಗಳಲ್ಲಿ)

| ಕ್ರ. ಸಂ | ಯೋಜನೆಯ ಹೆಸರು | 2018–19 | | 2019–20 | | 2020–21 | | 2021–22 | | 2022–23 | |
|---|---|---|---|---|---|---|---|---|---|---|---|
| | | ಭೌತಿಕ | ಆರ್ಥಿಕ | ಭೌತಿಕ | ಆರ್ಥಿಕ | ಭೌತಿಕ | ಆರ್ಥಿಕ | ಭೌತಿಕ | ಆರ್ಥಿಕ | ಭೌತಿಕ | ಆರ್ಥಿಕ |
| 1 | ಸ್ವಯಂ ಉದ್ಯೋಗ ನೇರ ಸಾಲ ಯೋಜನೆ | 367 | 180.80 | 833 | 416.90 | 506 | 252.80 | 911 | 455.50 | 818 | 409.00 |
| 2 | ಅರಿವು ಶೈಕ್ಷಣಿಕ ಸಾಲ ಯೋಜನೆ (ನೂತನ) | 89 | 62.15 | 72 | 57.80 | 50 | 23.79 | 0 | 0 | 55 | 48.63 |
| | ಅರಿವು ಶೈಕ್ಷಣಿಕ ಸಾಲ ಯೋಜನೆ(ನವೀಕರಣ) | – | 133.06 | – | 70.04 | – | 52.11 | – | – | 65 | 48.90 |
| 3 | ಗಂಗಾ ಕಲ್ಯಾಣ ನೀರಾವರಿ ಯೋಜನೆ | 47 | 98.51 | 208 | 275.67 | – | – | – | – | 43 ಆ.ಮಂ ನೀಡಲಾಗಿದೆ. | – |
| | ಒಟ್ಟು | 503 | 474.52 | 1113 | 820.41 | 556 | 328.7 | 911 | 455.5 | 981 | 506.53 |

ವ್ಯವಸ್ಥಾಪಕ ನಿರ್ದೇಶಕರು.

Scanned with CamScanner

## ನಿಗಮದ ಪತ್ರ ಸಂಖ್ಯೆ: ಕಆಸಅನಿ/ಸಿಆರ್-34/2023-24, ದಿ: 13.12.2023ರ ಪತ್ರಕ್ಕೆ
## ಅನುಬಂದ-2.

➢ **ಕಳೆದ ನಾಲ್ಕು ವರ್ಷದ ಬಿಡುಗಡೆಯಾದ ಅನುದಾನ ಮತ್ತು ವೆಚ್ಚಗಳ ವಿವರಗಳು.**

**2018-19 ಮತ್ತು 2019-20ನೇ ಸಾಲುಗಳ ಪ್ರಗತಿ.**

(ರೂ.ಲಕ್ಷಗಳಲ್ಲಿ)

| ಕ್ರ. ಸಂ. | ಯೋಜನೆಯ ಹೆಸರು | ಘಟಕ ವೆಚ್ಚ ಒಂದಕ್ಕೆ | ಗುರಿ | | ಸಾಧನೆ | |
|---|---|---|---|---|---|---|
| | | | ಭೌತಿಕ | ಆರ್ಥಿಕ | ಭೌತಿಕ | ಆರ್ಥಿಕ |
| 1 | ಸ್ವಯಂ ಉದ್ಯೋಗ ನೇರ ಸಾಲ ಯೋಜನೆ | 1.00 | 927 | 927.00 | 1017 | 881.63 |
| 2 | ಅರಿವು-ಶೈಕ್ಷಣಿಕ ಸಾಲ ಯೋಜನೆ | 1.00 | 73 | 73.00 | 30 | 26.53 |
| 3 | ಆಡಳಿತ ವೆಚ್ಚ | - | - | 100.00 | - | 100.00 |
| | | **ಒಟ್ಟು** | **1000** | **1100.00** | **1047** | **1008.16** |

**2020-21ನೇ ಸಾಲಿನ ಪ್ರಗತಿ.**

| ಕ್ರ. ಸಂ. | ಯೋಜನೆಯ ಹೆಸರು | ಘಟಕ ವೆಚ್ಚ ಒಂದಕ್ಕೆ | ಗುರಿ | | ಸಾಧನೆ | |
|---|---|---|---|---|---|---|
| | | | ಭೌತಿಕ | ಆರ್ಥಿಕ | ಭೌತಿಕ | ಆರ್ಥಿಕ |
| 1 | ಸ್ವಯಂ ಉದ್ಯೋಗ ನೇರ ಸಾಲ ಯೋಜನೆ | 1.00 | 385 | 385.00 | 532 | 418.50 |
| 2 | ಅರಿವು-ಶೈಕ್ಷಣಿಕ ಸಾಲ ಯೋಜನೆ | 1.00 | 50 | 50.00 | 23 | 19.56 |
| 3 | ಅರಿವು-ಶೈಕ್ಷಣಿಕ ಸಾಲ ಯೋಜನೆ (ನವೀಕರಣ ವಿದ್ಯಾರ್ಥಿಗಳು) | - | 30 | 25.00 | 29 | 24.10 |
| 4 | ಆಡಳಿತ ವೆಚ್ಚ | - | - | 125.00 | - | 120.00 |
| | | **ಒಟ್ಟು** | **465** | **585.00** | **584** | **582.16** |

**2021-22 ನೇ ಸಾಲಿನ ಪ್ರಗತಿ.**

| ಕ್ರ. ಸಂ. | ಯೋಜನೆಯ ಹೆಸರು | ಗುರಿ | | ಸಾಧನೆ | |
|---|---|---|---|---|---|
| | | ಭೌತಿಕ | ಆರ್ಥಿಕ | ಭೌತಿಕ | ಆರ್ಥಿಕ |
| 1 | ಸ್ವಯಂ ಉದ್ಯೋಗ ನೇರ ಸಾಲ ಯೋಜನೆ | 360 | 360.00 | 411 | 361.00 |
| 2 | ಅರಿವು-ಶೈಕ್ಷಣಿಕ ಸಾಲ ಯೋಜನೆ (ನವೀನ ವಿದ್ಯಾರ್ಥಿಗಳು) | 33 | - | 32 | 26.00 |
| 3 | ಆಡಳಿತ ವೆಚ್ಚ | - | 140.00 | - | 119.00 |
| | **ಒಟ್ಟು** | **393** | **500.00** | **443** | **506.00** |

**2022-23 ನೇ ಸಾಲಿನ ಪ್ರಗತಿ.**

| ಕ್ರ. ಸಂ. | ಯೋಜನೆಯ ಹೆಸರು | ಗುರಿ | | ಸಾಧನೆ | |
|---|---|---|---|---|---|
| | | ಭೌತಿಕ | ಆರ್ಥಿಕ | ಭೌತಿಕ | ಆರ್ಥಿಕ |
| 1 | ಸ್ವಯಂ ಉದ್ಯೋಗ ನೇರ ಸಾಲ ಯೋಜನೆ | 850 | 850.00 | 836 | 836.00 |
| 2 | ಅರಿವು-ಶೈಕ್ಷಣಿಕ ಸಾಲ ಯೋಜನೆ (ನವೀನ ವಿದ್ಯಾರ್ಥಿಗಳು) | 30 | 30.00 | 30 | 28.47 |
| 3 | ಅರಿವು-ಶೈಕ್ಷಣಿಕ ಸಾಲ ಯೋಜನೆ (ನವೀಕರಣ ವಿದ್ಯಾರ್ಥಿಗಳು) | 17 | 15.00 | 17 | 15.00 |
| 4 | ಆರ್ಯ ವೈಶ್ಯ ಆಹಾರ ವಾಹಿನಿ ಯೋಜನೆ | 50 | 100.00 | 7 | 14.00 |
| 5 | ವಿದ್ಯಾರ್ಥಿ ವೇತನ (SSP) | - | 385.00 | 4366 | 540.00 |
| 6 | ಆಡಳಿತ ವೆಚ್ಚ | - | 120.00 | - | 117.00 |
| | **ಒಟ್ಟು** | **947** | **1500.00** | **5256** | **1550.47** |

**ಟಿಪ್ಪಣಿ:-**

ಬಿಡುಗಡೆಯಾದ ರೂ.15.00 ಕೋಟಿ ವೆಚ್ಚದಲ್ಲಿ ನಿಗಮದ ಯೋಜನಗಳಿಗೆ ಹಾಗೂ ವಿದ್ಯಾರ್ಥಿ ವೇತನ ನೀಡಲಾಗಿರುತ್ತದೆ. ಹೆಚ್ಚುವರಿಯಾಗಿ ಮರುಪಾವತಿ ಮೊತ್ತವನ್ನು ಭರಿಸಲಾಗಿರುತ್ತದೆ.

ವ್ಯವಸ್ಥಾಪಕ ನಿರ್ದೇಶಕರು.